ಶ್ರೀ ಸಿ.ಟಿ.ರವಿ (ಉನ್ನತ ಶಿಕ್ಷಣ ಸಚಿವರು) :– ಮಾನ್ಯ ಅಧ್ಯಕ್ಷರೆ, ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2013ನೇ ಸಾಲಿನ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ[ತಿದ್ದುಪಡಿ] ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು :– ಪ್ರಸ್ತಾವ ಏನೆಂದರೆ,

'ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2013ನೇ ಸಾಲಿನ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ [ತಿದ್ದುಪಡಿ] ವಿಧೇಯಕವನ್ನು ಅಂಗೀಕರಿಸುವುದು'

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರೆತಿದೆ.

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕ್ಕೆ ಅನುಮೋದನೆ ನೀಡಲಾಯಿತು)

6. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ :– ಮಾನ್ಯ ಅಧ್ಯಕ್ಷರೆ, ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದಿಡುತ್ತೇನೆ.

i) ಸಿ.ಎಂ.ಆರ್. ವಿಶ್ವವಿದ್ಯಾಲಯ ವಿಧೇಯಕ, 2013 (ಅನುಬಂಧ–8)

ii) ನ್ಯೂ ಬಾಲ್ಡ್‌ವಿನ್ ವಿಶ್ವವಿದ್ಯಾಲಯ ವಿಧೇಯಕ, 2013 (ಅನುಬಂಧ–9)

iii) ಪ್ರೆಸಿಡೆನ್ಸಿ ವಿಶ್ವವಿದ್ಯಾಲಯ ವಿಧೇಯಕ, 2013 (ಅನುಬಂಧ–10)

ಅಧ್ಯಕ್ಷರು :– ಮಂಡಿಸಲಾಯಿತು.